# All India Radio: Bangalore
# National Bulletin In Kannada
# 05.010.2026  19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.10.2026  19.35  hrs**

---

ಮುಖ್ಯಾಂಶಗಳು

೧.	ರಕ್ಷಣಾ ಹಾಗೂ ಶೈಕ್ಷಣಿಕ ಪಾಲುದಾರಿಕೆ ಬಲವರ್ಧನೆಗೆ ಭಾರತ-ಸ್ವಿಟ್ಜರ್‌ಲ್ಯಾಂಡ್ ಒಮ್ಮತ

೨.	ಮತದಾರರ ಪಟ್ಟಿಯ ನಮೂನೆ ೬ ರಲ್ಲಿ ಬದಲಾವಣೆಗಳಿಗೆ ಆಯೋಗ ಅನುಮೋದನೆ ನೀಡಿಲ್ಲ - ಸುಪ್ರೀಂ ಕೋರ್ಟ್ ಸ್ಪಷ್ಟನೆ

೩.	ನವದೆಹಲಿಯಲ್ಲಿ 'ಇಂಡಿಯಾ ಕೆಮ್'ನ ೧೪ನೇ ಆವೃತ್ತಿಗೆ ಕೇಂದ್ರ ಸಚಿವೆ ಅನುಪ್ರಿಯಾ ಪಟೇಲ್ ಚಾಲನೆ

೪.	ಭಾರತೀಯ ರಿಸರ್ವ್ ಬ್ಯಾಂಕ್‌ನ ಹಣಕಾಸು ನೀತಿ ಸಮಿತಿಯ ಮೂರು ದಿನಗಳ ಸಭೆ ಮುಂಬೈನಲ್ಲಿ ಆರಂಭ

---

ರಕ್ಷಣಾ ವಲಯದ ತರಬೇತಿ ಹಾಗೂ ರಕ್ಷಣಾ ಉದ್ಯಮಗಳಲ್ಲಿ ಪರಸ್ಪರ ಸಹಕಾರವನ್ನು ವಿಸ್ತರಿಸಲು ಭಾರತ ಮತ್ತು ಸ್ವಿಟ್ಜರ್‌ಲ್ಯಾಂಡ್ ನಿರ್ಧರಿಸಿವೆ.

ನವದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಪಶ್ಚಿಮ ವಲಯ ಕಾರ್ಯದರ್ಶಿ ಸಿಬಿ ಜಾರ್ಜ್, 'ಮೇಕ್ ಇನ್ ಇಂಡಿಯಾ' ಯೋಜನೆಯಡಿಯಲ್ಲಿ ಭಾರತದಲ್ಲಿ ಜಂಟಿ ಉತ್ಪಾದನೆ ಮತ್ತು ಅಭಿವೃದ್ಧಿ ಕೈಗೊಳ್ಳಲು ಸ್ವಿಟ್ಜರ್‌ಲ್ಯಾಂಡ್ ಕಂಪನಿಗಳಿಗೆ ಅತ್ಯುತ್ತಮ ಅವಕಾಶಗಳಿವೆ ಎಂದಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಭಾರತಕ್ಕೆ ಭೇಟಿ ನೀಡಿರುವ ಸ್ವಿಟ್ಜರ್‌ಲ್ಯಾಂಡ್ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಈ ವೇಳೆ ಮೂಲಸೌಕರ್ಯ, ವಿಜ್ಞಾನ, ತಂತ್ರಜ್ಞಾನ, ಬಾಹ್ಯಾಕಾಶ ಮತ್ತು ಪರಮಾಣು ಶಕ್ತಿ ವಲಯಗಳಲ್ಲಿ ಸಹಕಾರವನ್ನು ಮುಂದುವರಿಸಲು ಉಭಯ ನಾಯಕರು ಒತ್ತು ನೀಡಿದ್ದು, ಪ್ರಮುಖ ಒಪ್ಪಂದಗಳು ಹಾಗೂ ತಿಳುವಳಿಕಾ ಪತ್ರಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು.

ಸಭೆಯ ಭಾಗವಾಗಿ ದೆಹಲಿಯಲ್ಲಿ ಆಯೋಜಿಸಲಾಗಿರುವ ಸಮೃದ್ಧಿ ಶೃಂಗಸಭೆ'ಯಲ್ಲಿ ಸ್ವಿಟ್ಜರ್‌ಲ್ಯಾಂಡ್ ಅಧ್ಯಕ್ಷರು ಪಾಲ್ಗೊಳ್ಳಲಿದ್ದಾರೆ. ಕಳೆದ ವರ್ಷ ಅಕ್ಟೋಬರ್ ೧ ರಂದು ಜಾರಿಗೆ ಬಂದ ಭಾರತ-ಐರೋಪ್ಯ ಮುಕ್ತ ವ್ಯಾಪಾರ ಒಪ್ಪಂದ - ವ್ಯಾಪಾರ ಮತ್ತು ಆರ್ಥಿಕ ಪಾಲುದಾರಿಕೆ ಒಪ್ಪಂದದ ಮೊದಲ ವರ್ಷದ ಸ್ಮರಣಾರ್ಥ ಈ ಸಮಾವೇಶ ನಡೆಯುತ್ತಿದೆ. ೨೦೨೭ ರ ಜೂನ್‌ನಲ್ಲಿ ಜೆನಿವಾದಲ್ಲಿ ನಡೆಯಲಿರುವ 'ಎಐ ಶೃಂಗಸಭೆ'ಗೆ ಭಾರತ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಪ್ರಧಾನಿ ಭರವಸೆ ನೀಡಿದ್ದಾರೆ.

---

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ ಸಂದರ್ಭದಲ್ಲಿ ಚುನಾವಣಾ ಆಯೋಗ ಬಳಸುತ್ತಿರುವ ನಮೂನೆ ೬ರಲ್ಲಿ ಯಾವುದೇ ಬದಲಾವಣೆಗೆ ಸುಪ್ರೀಂ ಕೋರ್ಟ್ ಅನುಮೋದನೆ ನೀಡಿಲ್ಲ ಎಂದು ಸ್ಪಷ್ಟಪಡಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠವು, ನಮೂನೆ ೬ರಲ್ಲಿ ಬದಲಾವಣೆಗಳನ್ನು ಯಾರು ಮಾಡಿದ್ದಾರೆ ಎಂಬುದನ್ನು ತಿಳಿಯಲು ಸಂಬಂಧಿತ ದಾಖಲೆಗಳನ್ನು ಸಲ್ಲಿಸುವಂತೆ ಸೂಚಿಸಿದೆ.

ಫಾರ್ಮ್ ೬ರಲ್ಲಿ ಅರ್ಜಿದಾರರ ವಂಶಾವಳಿ ಹಾಗೂ ಹಿಂದಿನ ವಿಶೇಷ ತೀವ್ರ ಪರಿಷ್ಕರಣೆಯೊಂದಿಗೆ ಸಂಪರ್ಕಕ್ಕೆ ಸಂಬಂಧಿಸಿದ ಅಂಶಗಳನ್ನು ಸೇರಿಸಿರುವುದನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯ ವಿಚಾರಣೆಯನ್ನು ನ್ಯಾಯಾಲಯ ನಡೆಸಿತು.

ಈ ಸಂಬಂಧ ಕೇಂದ್ರ ಸರ್ಕಾರ, ಚುನಾವಣಾ ಆಯೋಗ ಸೇರಿದಂತೆ ಸಂಬಂಧಪಟ್ಟವರಿಗೆ ನೋಟಿಸ್ ಜಾರಿಗೊಳಿಸಿ, ಇದೇ ವಿಷಯಕ್ಕೆ ಸಂಬಂಧಿಸಿದ ಮತ್ತೊಂದು ಸಾರ್ವಜನಿಕ ಹಿತಾಸಕ್ತಿ ಅರ್ಜಿಯೊಂದಿಗೆ ಪ್ರಕರಣವನ್ನು ವಿಚಾರಣೆಗೆ ಸೇರಿಸಿದೆ.

---

ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ ಸಂದರ್ಭದಲ್ಲಿ ಚುನಾವಣಾ ಆಯೋಗದಲ್ಲಿ ಏಕಪಕ್ಷೀಯ ನಿರ್ಧಾರ ಕೈಗೊಂಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ಅಮಾನತಿಗೆ ಮಧ್ಯಂತರ ಆದೇಶ ನೀಡಲು ಸುಪ್ರೀಂ ಕೋರ್ಟ್ ಇಂದು ನಿರಾಕರಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠವು ಕೇಂದ್ರ ಸರ್ಕಾರ, ಚುನಾವಣಾ ಆಯೋಗ ಹಾಗೂ ಇತರ ಪ್ರತಿವಾದಿಗಳಿಗೆ ನೋಟಿಸ್ ಜಾರಿ ಮಾಡಿದೆ. ಪತ್ರಿಕಾ ವರದಿಗಳ ಆಧಾರದ ಮೇಲೆ ಮಾತ್ರ ಏಕಪಕ್ಷೀಯ ಆದೇಶ ನೀಡಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

---

ಭಾರತವನ್ನು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯನ್ನಾಗಿ ರೂಪಿಸುವ ರಾಷ್ಟ್ರೀಯ ಗುರಿಯನ್ನು ತಲುಪಲು ಸರ್ಕಾರ ರಾಸಾಯನಿಕ ಮತ್ತು ಪೆಟ್ರೋಕೆಮಿಕಲ್ ವಲಯಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ತಿಳಿಸಿದ್ದಾರೆ.

ನವದೆಹಲಿಯಲ್ಲಿ 'ಇಂಡಿಯಾ ಖೆಮ್'ನ ೧೪ನೇ ಆವೃತ್ತಿಗೆ ಚಾಲನೆ ನೀಡಿ ಮಾತನಾಡಿದ ಅವರು, ಭಾರತೀಯ ರಾಸಾಯನಿಕ ಉದ್ಯಮ ೨೦೩೦ರ ವೇಳೆಗೆ ೩೦೦ ಶತಕೋಟಿ ಅಮೆರಿಕನ್ ಡಾಲರ್ ತಲುಪುವ ನಿರೀಕ್ಷೆಯಿದ್ದು, ೨೦೪೦ರ ವೇಳೆಗೆ ೧ ಟ್ರಿಲಿಯನ್ ಡಾಲರ್ ಮೌಲ್ಯದ ಬೃಹತ್ ಉದ್ಯಮವಾಗಿ ಬೆಳೆಯಲಿದೆ ಎಂದರು.

'ಇಂಡಿಯಾ ಖೆಮ್' ನ ೧೪ನೇ ಆವೃತ್ತಿಯ ಜಾಗತಿಕ ಪ್ರದರ್ಶನ ಮತ್ತು ಸಮ್ಮೇಳನ ಇದೇ ೨೨ ರಿಂದ ೨೪ ರವರೆಗೆ ಮುಂಬೈನಲ್ಲಿ ನಡೆಯಲಿದ್ದು, ಏಷ್ಯಾ-ಪೆಸಿಫಿಕ್ ವಲಯದ ಪ್ರಮುಖ ಉದ್ಯಮ ನಾಯಕರು ಹಾಗೂ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.

---

ಭಾರತೀಯ ರಿಸರ್ವ್ ಬ್ಯಾಂಕ್‌ನ ಹಣಕಾಸು ನೀತಿ ಸಮಿತಿಯ ಮೂರು ದಿನಗಳ ಸಭೆ ಇಂದು ಮುಂಬೈನಲ್ಲಿ ಆರಂಭವಾಗಿದೆ. ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆ, ಏರಿಕೆಯಾಗಿರುವ ಕಚ್ಚಾ ತೈಲ ಬೆಲೆ ಹಾಗೂ ಆಹಾರ ಹಣದುಬ್ಬರದ ಆತಂಕದ ನಡುವೆಯೇ ಸಭೆ ನಡೆಯುತ್ತಿದೆ.

ಹಣದುಬ್ಬರದ ಮುನ್ನೋಟ ಮತ್ತು ದೇಶದ ಆರ್ಥಿಕ ಪರಿಸ್ಥಿತಿಯನ್ನು ಸಮಿತಿ ಪರಿಶೀಲಿಸಲಿದೆ. ಮೂರು ದಿನಗಳ ಸಭೆಯ ಅಂತ್ಯದಲ್ಲಿ ನೀತಿ ನಿರ್ಧಾರ ಪ್ರಕಟವಾಗಲಿದೆ. ಪ್ರಸ್ತುತ ಆರ್‌ಬಿಐನ ರೆಪೊ ದರ ಶೇಕಡ ೫.೨೫ರಷ್ಟಿದೆ.

ಫೆಬ್ರವರಿ ೨೦೨೩ರಲ್ಲಿ ಕೊನೆಯ ಬಾರಿ ರೆಪೊ ದರವನ್ನು ೨೫ ಮೂಲಾಂಶ ಹೆಚ್ಚಿಸಿ ಶೇಕಡ ೬.೫೦ಕ್ಕೆ ನಿಗದಿಪಡಿಸಲಾಗಿತ್ತು. ನಂತರ ೨೦೨೩-೨೪ರ ಅವಧಿಯಲ್ಲಿ ದರವನ್ನು ಯಥಾಸ್ಥಿತಿಯಲ್ಲಿ ಕಾಯ್ದುಕೊಂಡು, ೨೦೨೫ರಲ್ಲಿ ದರ ಕಡಿತದ ಪ್ರಕ್ರಿಯೆ ಆರಂಭಿಸಲಾಗಿತ್ತು.

---

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ದೇಶಾದ್ಯಂತ, 'ಜನ ಸೇವೆಯೇ ದೇಶ ಸೇವೆ' ಎಂಬ ಅಭಿಯಾನ ನಡೆಯುತ್ತಿದೆ.

ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಭಯೋತ್ಪಾದನೆಯ ವಿರುದ್ಧ ದಿಟ್ಟ ಹೆಜ್ಜೆ ಕುರಿತ ಒಂದು ವರದಿ ಇಲ್ಲಿದೆ.

೨೬/೧೧ರ ಮುಂಬೈ ದಾಳಿಯ ನಂತರ ಪಾಕ್ ಪ್ರೇರಿತ ಭಯೋತ್ಪಾದನೆಗೆ ಭಾರತದ ಪ್ರತಿಕ್ರಿಯೆ ಕೇವಲ ಕಾಗದದ ದಾಖಲೆಗಳಿಗೆ ಸೀಮಿತವಾಗಿತ್ತು. ಯಾವುದೇ ಪ್ರತ್ಯುತ್ತರದ ಭಯವಿಲ್ಲದ ಕಾರಣ ಉಗ್ರರ ದಾಳಿಗಳು ನಿರಂತರವಾಗಿ ಮುಂದುವರಿದಿದ್ದವು.

ಆದರೆ, ೨೦೧೬ರ ಸೆಪ್ಟೆಂಬರ್‌ನಲ್ಲಿ ಗಡಿ ನಿಯಂತ್ರಣ ರೇಖೆ ದಾಟಿ ಭಾರತ ನಡೆಸಿದ ಸರ್ಜಿಕಲ್ ಸ್ಟ್ರೈಕ್ ಈ ಹಿಂಜರಿಕೆಯ ನೀತಿಗೆ ಪೂರ್ಣವಿರಾಮ ಹಾಕಿತು. ತದನಂತರ, ೨೦೧೯ ರ 'ಬಾಲಾಕೋಟ್' ವಾಯುದಾಳಿ ಹಾಗೂ ಮೇ ೨೦೨೫ ರ 'ಆಪರೇಷನ್ ಸಿಂಧೂರ್' ಕಾರ್ಯಾಚರಣೆಗಳ ಮೂಲಕ ಭಾರತ, ಪಾಕಿಸ್ತಾನದಲ್ಲಿದ್ದ ಉಗ್ರರ ಅಡಗುತಾಣಗಳನ್ನು ಧ್ವಂಸಗೊಳಿಸಿತು.

ಭಯೋತ್ಪಾದಕರು ಮತ್ತು ಅವರಿಗೆ ಆಶ್ರಯ ನೀಡುವ ಆಡಳಿತವನ್ನು ಪ್ರತ್ಯೇಕಿಸಿ ನೋಡದಿರುವುದು ಭಾರತದ ಸ್ಪಷ್ಟ ನೀತಿಯಾಗಿದೆ.

---

ದೆಹಲಿ, ಗುಜರಾತ್ ಹಾಗೂ ತೆಲಂಗಾಣ ಹೈಕೋರ್ಟ್‌ಗಳ ಮುಖ್ಯ ನ್ಯಾಯಮೂರ್ತಿಗಳನ್ನು ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳನ್ನಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ನೇಮಕ ಮಾಡಿದ್ದಾರೆ.

ಗುಜರಾತ್ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಸುನೀತಾ ಅಗರ್‌ವಾಲ್, ದೆಹಲಿ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ದೇವೇಂದ್ರ ಕುಮಾರ್ ಉಪಾಧ್ಯಾಯ ಹಾಗೂ ತೆಲಂಗಾಣ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಅಪರೇಶ್ ಕುಮಾರ್ ಸಿಂಗ್ ಅವರನ್ನು ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳನ್ನಾಗಿ ನೇಮಕ ಮಾಡಲಾಗಿದೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಸಾಮಾಜಿಕ ಜಾಲತಾಣದ ಮೂಲಕ ಮಾಹಿತಿ ನೀಡಿದ್ದಾರೆ.

---

ಪಿಂಚಣಿ ಆಡಳಿತ, ಪಿಂಚಣಿದಾರರು ಎದುರಿಸುತ್ತಿರುವ ಸಮಸ್ಯೆಗಳು ಮತ್ತು ಅನುಭವಗಳಿಂದ ನಿರಂತರವಾಗಿ ಕಲಿತು, ವ್ಯವಸ್ಥೆಯಲ್ಲಿರುವ ಲೋಪಗಳನ್ನು ಸರಿಪಡಿಸುವತ್ತ ಗಮನಹರಿಸಬೇಕು ಎಂದು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಖಾತೆ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ೧೭ನೇ ಅಖಿಲ ಭಾರತ ಪಿಂಚಣಿ ಅದಾಲತ್‌ನಲ್ಲಿ ಮಾತನಾಡಿದ ಅವರು, ಪಿಂಚಣಿದಾರರು ಮತ್ತು ಅವರ ಕುಟುಂಬಗಳಿಗೆ ಸರಳ ಹಾಗೂ ಸುಲಭವಾಗಿ ಲಭ್ಯವಾಗುವ ಸೇವೆಗಳನ್ನು ಒದಗಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದರು.

---

ಉತ್ತರ ಪ್ರದೇಶದಲ್ಲಿ ನಡೆಯಲಿರುವ ರಾಜ್ಯಸಭೆ ಚುನಾವಣೆಗೆ ಬಿಜೆಪಿ ೮ ಅಭ್ಯರ್ಥಿಗಳ ಹೆಸರನ್ನು ಘೋಷಿಸಿದೆ. ಧರ್ಮಪಾಲ್ ಸಿಂಗ್, ರಾಧಾಕಾಂತ್ ಓಜಾ, ಪ್ರಕಾಶ್ ಪಾಲ್,

ವಿದ್ಯಾಸಾಗರ್ ಸೋನ್ಕರ್, ಗೋಪಿಕೃಷ್ಣ ಪಾಂಡೆ, ಪ್ರಿಯಾಂಕಾ ಸಿಂಗ್ ರಾವತ್, ರಾಮ್ ಪ್ರತಾಪ್ ಸಿಂಗ್ ಚೌಹಾಣ್ ಮತ್ತು ಶ್ರುತಿ ಗಂಗ್ವಾರ್ ಅವರನ್ನು ಅಭ್ಯರ್ಥಿಗಳನ್ನಾಗಿ ಕಣಕ್ಕಿಳಿಸಿದೆ.

ಬಿಜೆಪಿ ಕೇಂದ್ರ ಚುನಾವಣಾ ಸಮಿತಿ ಈ ಹೆಸರುಗಳಿಗೆ ಅನುಮೋದನೆ ನೀಡಿದೆ. ನಾಮಪತ್ರ ಸಲ್ಲಿಸಲು ನಾಳೆ ಕೊನೆಯ ದಿನವಾಗಿದೆ.

ಉತ್ತರ ಪ್ರದೇಶದ ೧೦, ಉತ್ತರಾಖಂಡದ ೧ ರಾಜ್ಯಸಭಾ ಸ್ಥಾನ ಹಾಗೂ ಪಶ್ಚಿಮ ಬಂಗಾಳದ ೧ ಸ್ಥಾನಕ್ಕೆ ನಡೆಯಲಿರುವ ಉಪಚುನಾವಣೆಗೆ ಇದೇ ತಿಂಗಳ ೧೯ರಂದು ಮತದಾನ ನಡೆಯಲಿದೆ.

____________________

ಪ್ರಾಜೆಕ್ಟ್ ಚೀತಾ ಯೋಜನೆಯಡಿ ಭಾರತದಲ್ಲಿ ಜನಿಸಿದ ಹೆಣ್ಣು ಚೀತಾವೊಂದು ಮಧ್ಯಪ್ರದೇಶದ ಕುನೋ ರಾಷ್ಟ್ರೀಯ ಉದ್ಯಾನದಲ್ಲಿ ಇಂದು ಐದು ಆರೋಗ್ಯವಂತ ಮರಿಗಳಿಗೆ ಜನ್ಮ ನೀಡಿದೆ. ಇದರೊಂದಿಗೆ ಭಾರತದಲ್ಲಿನ ಒಟ್ಟು ಚೀತಾಗಳ ಸಂಖ್ಯೆ ೬೦ಕ್ಕೆ ಏರಿದ್ದು, ಈ ಪೈಕಿ ೪೧ ಚೀತಾಗಳು ಭಾರತದಲ್ಲೇ ಜನಿಸಿವೆ.

_________ ಮುಕ್ತಾಯ _________